## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಅಶೋಕ ರೆಡ್ಡಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಪಾವಗಡ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯವರನ್ನು ನೇಮಿಸುವ ಬಗ್ಗೆ-ಆದೇಶ.

**ಓದಲಾಗಿದೆ**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಸಂಖ್ಯೆ:ತುಜಿಪಂ;ಅಭಿ:ಎಂಜಿಎನ್‌ಆರ್‌ಜಿಇ:ಲೋಕಾಯುಕ್ತ/ಹ.ದು/ವಸೂಲಿ/ 2014-15, ದಿ:31.7.2015
2. ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 47 ಇಎಸ್‌ಕ್ಯೂ 2014, ದಿನಾಂಕ:24.11.2015.
3. ಶ್ರೀ ಅಶೋಕ ರೆಡ್ಡಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿವರಣೆ ದಿನಾಂಕ:12.3.2016.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:31.7.2015ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ರವರು ಶ್ರೀ ಅಶೋಕ ರಡ್ಡಿ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಪಾವಗಡ ಇಲ್ಲಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, 2009-10 ಮತ್ತು 2010-11 ನೇ ಸಾಲಿನಲ್ಲಿ ಪಾವಗಡ ತಾಲ್ಲೂಕಿನ ರೊಪ್ಪ, ಬಿ.ಕೆ.ಹಳ್ಳಿ ಮತ್ತು ಬ್ಯಾಡನೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳ ಅನುಷ್ಠಾನದಲ್ಲಿ ಕರ್ತವ್ಯ ಲೋಪವೆಸಗಿರುವುದು, ಕಳಪೆ ಕಾಮಗಾರಿಯನ್ನು ನಿರ್ವಹಿಸಿರುತ್ತಾರೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ ಅವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಆರೋಪ ಪಟ್ಟಿ ಅನುಬಂಧ-1 ರಿಂದ 4 ನ್ನು ಒಳಗೊಂಡ ಪ್ರಸ್ತಾವನೆಯನ್ನು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸಿದ್ದರು.

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಅಶೋಕರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಕ.ನಾ.ಸೇ (ವ.ನಿ.ಮೇ) ನಿಯಮಗಳ ನಿಯಮ 11 ರಡಿ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ, ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:24.11.2015 ರಂದು ಕಾರಣ ಕೇಳುವ ನೋಟಿಸ್‌ನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಶ್ರೀ ಅಶೋಕರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:12.3.2016 ರಂದು ಸರ್ಕಾರಕ್ಕೆ ವಿವರಣೆ ಸಲ್ಲಿಸಿ, ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿ, ಅವರನ್ನು ದೋಷಮುಕ್ತಗೊಳಿಸಬೇಕೆಂದು ಕೋರಿದ್ದರು. ಸರ್ಕಾರವು ಆರೋಪಗಳು ಹಾಗೂ ಸದರಿ ಆರೋಪಗಳಿಗೆ ಸಂವಾದಿಯಾಗಿ ಅಪಾದಿತರು ಸಲ್ಲಿಸಿರುವ ವಿವರಣೆಗಳನ್ನು ಪರಿಶೀಲಿಸಿದ್ದು, ಅಪಾದಿತರು ತಮ್ಮ

---2

ಆರೋಪಗಳನ್ನು ನಿರಾಕರಿಸಿರುವುದರಿಂದ ಪ್ರಕರಣದ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ವಿವರವಾದ ವಿಚಾರಣೆಯನ್ನು ಜರುಗಿಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ,ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಗ್ರಾಅಪ 47 ಇಎನ್‌ಕ್ಯೂ 2014, ಬೆಂಗಳೂರು, ದಿನಾಂಕ:04.5.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಅಶೋಕರೆಡ್ಡಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಪಾವಗಡ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11(2) ರಡಿ ನಡೆಸಲು ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎ. ಕೃಷ್ಣಪ್ಪ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11 (5)(ಸಿ) ರನ್ವಯ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ತುಮಕೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು. ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆ ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

04/05/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
7. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು. ನಂ- 1242, 8 ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-560040, ದೂರವಾಣಿ ಸಂಖ್ಯೆ:-080-23394245
8. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ತುಮಕೂರು
9. ಶ್ರೀ ಅಶೋಕರೆಡ್ಡಿ, ಎನ್.ಎನ್. ನಿವೃತ್ತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಶ್ರೀ ನಿವಾಸಂ, 2 ನೇ ಕ್ರಾಸ್, ಕೆ.ಎ.ಬಿ ಕಛೇರಿ ಎದುರು ಪತಂಜಲಿ ನಗರ, ಪಾವಗಡ.
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
12. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.